ಶುಕ್ರವಾರ 22.08.2025 ಬೆಂಗಳೂರು ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 30

Digital Varthe Kannada Daily Volume 01 - Issue 30 Friday 22.08.2025 Price: 5/- Rs 2 Pages Bangalore

DIGITAL VARTHE

www.digitalvarthe.com

# ಡಿಜಿಟಲ್ ವಾರ್ತೆ

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

## ಧರ್ಮಸ್ಥಳದ ಬಗ್ಗೆ ಅಪಪ್ರಚಾರ :ಕಿಡಿಗೇಡಿಗಳ ಬಂಧನಕ್ಕೆ ಆಗ್ರಹಿಸಿ ಬೃಹತ್ ಪ್ರತಿಭಟನೆ!



### ಅನಾಮಿಕ-ತಿಮ್ಮರೋಡಿ ಗ್ಯಾಂಗ್ ವಿರುದ್ಧ ತನಿಖೆ, ಬಂಧನಕ್ಕೆ ಆಗ್ರಹ

ಕೃಷ್ಣರಾಜಪೇಟೆ: ಧರ್ಮಸ್ಥಳ ಶ್ರೀ ಕ್ಷೇತ್ರದ ವಿರುದ್ಧ ಯೂಟ್ಯೂಬ್‌ಗಳು ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ನಿರಂತರವಾಗಿ ಅಪಪ್ರಚಾರ ಮಾಡುತ್ತಿರುವ ಕಿಡಿಗೇಡಿಗಳನ್ನು ಕೂಡಲೇ ಬಂಧಿಸಬೇಕು. ಅನಾಮಿಕ, ಮಹೇಶ್ ತಿಮ್ಮರೋಡಿ, ಸಮೀರ್, ಗಿರೀಶ್ ಮಟ್ಟಣ್ಣನವರ್ ಇತರರು ತಮ್ಮಲ್ಲಿ ಸೌಜನ್ಯ ಘಟನೆಗೆ ಸಂಬಂಧಪಟ್ಟಂತೆ ಸಾಕ್ಷಿ ಇದೆ ಎಂದು ಹೇಳುತ್ತಾ ಧರ್ಮಸ್ಥಳ ಧರ್ಮಾಧಿಕಾರಿಗಳ ವಿರುದ್ಧ ಟೀಕೆಗಳನ್ನು ಮಾಡುತ್ತಿದ್ದು , ಕೂಡಲೇ ವಿಚಾರಣೆಗೆ ಗುರಿಪಡಿಸಬೇಕು ಎಂದು ಆಗ್ರಹಿಸಿ ತಾಲ್ಲೂಕು ಶ್ರೀ ಧರ್ಮಸ್ಥಳ ಕ್ಷೇತ್ರಾಭಿಮಾನಿಗಳ ವೇದಿಕೆಯ ಪಟ್ಟಣದ ಪ್ರವಾಸಿ ಮಂದಿರ ವೃತ್ತದಿಂದ ತಾಲ್ಲೂಕು ಕಚೇರಿಯವರೆಗೆ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಧರ್ಮಸ್ಥಳ ಶ್ರೀ ಮಂಜುನಾಥಸ್ವಾಮಿ ದೇವರ ಪೋಟೋಗೆ ಪೂಜೆ ಸಲ್ಲಿಸಿ ಬೃಹತ್ ಪ್ರತಿಭಟನೆ ಮತ್ತು ಪಾದಯಾತ್ರೆ ಜನಾಂದೋಲನ ಜಾಥಾಕ್ಕೆ ಚಾಲನೆ ನೀಡಲಾಯಿತು.

ತೆಂಡೇಕೆರೆ ಬಾಳೆಹೊನ್ನೂರು ಶಾಖಾ ಮಠದ ಶ್ರೀ ಗಂಗಾಧರ ಶಿವಾಚಾರ್ಯ ಸ್ವಾಮೀಜಿ, ಕಾಪನಹಳ್ಳಿ ಗವಿಮಠದ ಶ್ರೀ ಸ್ವತಂತ್ರ ಚೆನ್ನವೀರ ಸ್ವಾಮೀಜಿ, ಬೇಬಿ ಮಠದ ಶ್ರೀ ಶಿವಬಸವ ಸ್ವಾಮೀಜಿ ನೇತೃತ್ವದಲ್ಲಿ ಸಾವಿರಾರು ಮಂದಿ ಭಕ್ತಾಧಿಗಳು ಪ್ರವಾಸಿ ಮಂದಿರದಿಂದ ತಾಲ್ಲೂಕು ಕಚೇರಿಯವರೆಗೂ ಪಾದಾಯಾತ್ರೆ ಮೂಲಕ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿದರು.

ಧರ್ಮಸ್ಥಳ ಶ್ರೀ ಕ್ಷೇತ್ರದ ವಿರುದ್ಧ ಅಪಪ್ರಚಾರ ಮಾಡುತ್ತಿರುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ವಿದೇಶಿ ದೇಣಿಗೆ ಪಡೆದು ಧರ್ಮಸ್ಥಳ ಶ್ರೀ ಕ್ಷೇತ್ರದ ವಿರುದ್ಧ ನಿರಂತರವಾಗಿ ಸಾಮಾಜಿಕ ಜಾಲತಾಣಗಳಲ್ಲಿ ಹಾಗೂ ಯೂಟ್ಯೂಬ್‌ಗಳಲ್ಲಿ ಸುಳ್ಳು ಸುದ್ದಿಗಳನ್ನು ಪ್ರಚಾರ ಮಾಡುವ ಮೂಲಕ ಪವಿತ್ರ ಧರ್ಮಸ್ಥಳ ಕ್ಷೇತ್ರಕ್ಕೆ ಕೆಟ್ಟ ಹೆಸರು ತರಲಾಗುತ್ತಿರುವ ಕಿಡಿಗೇಡಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಧರ್ಮ ರಕ್ಷಕರಾದ ಶ್ರೀ ಖಾವಂದರೊಂದಿಗೆ ನಾವಿದ್ದೇವೆ. ದೇಶದ ಕೋಟಿ ಕೋಟಿ ಭಕ್ತರ ಭಾವನೆಗಳೊಂದಿಗೆ ಚೆಲ್ಲಾಟವಾಡುತ್ತಿರುವ ಕಿಡಿಗೇಡಿಗಳನ್ನು ದೇಶದಿಂದ ಗಡಿಪಾರು ಮಾಡಬೇಕು ಎಂದು ಒತ್ತಾಯಿಸುವ ಬಿತ್ತಿ ಪತ್ರಗಳನ್ನು ಪ್ರದರ್ಶನ ಒತ್ತಾಯ ಮಾಡಿದರು.

ಶಾಸಕ ಹೆಚ್.ಟಿ.ಮಂಜು ಮಾತನಾಡಿ ಹಿಂದೂಗಳ ಪವಿತ್ರ ಕ್ಷೇತ್ರವಾಗಿರುವ ಶ್ರೀಧರ್ಮಸ್ಥಳ ಕ್ಷೇತ್ರಕ್ಕೆ ಕೆಟ್ಟ ಹೆಸರು ತರಲು ಹಿಂದೂ ವಿರೋಧಿ ಕಾಣದ ಕೈಗಳು ಪಿತೂರಿ ನಡೆಸುತ್ತಿವೆ. ರಾಜ್ಯ ಸರ್ಕಾರವು ಕೂಡಲೇ ಅನಾಮಿಕ ಸೇರಿದಂತೆ, ಮಹೇಶ್ ತಿಮ್ಮರೋಡಿ, ಸಮೀರ್, ಮಟ್ಟಣ್ಣ ಅವರ ಗ್ಯಾಂಗ್ ಸುಳ್ಳು ಬಿತ್ತುವ ಗ್ಯಾಂಗ್ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು.

ಇವರುಗಳ ಬ್ಯಾಂಕ್ ಖಾತೆಗೆ ವಿದೇಶಗಳಿಂದ ಲಕ್ಷಾಂತರ ರೂ ಜಮಾ ಆಗಿರುವ ಬಗ್ಗೆ ಖಚಿತ ಮಾಹಿತಿ ಇದೆ. ಹಾಗಾಗಿ ಕೂಡಲೇ ಎಸ್.ಐ.ಟಿ. ಅಧಿಕಾರಿಗಳಿಂದ ಗುಂಡಿ ಅಗೆಯುವ ಕೆಲಸ ಬಿಟ್ಟು , ತಿಮ್ಮರೋಡಿ ಗ್ಯಾಂಗ್‌ಗಳ ಬ್ಯಾಂಕ್ ಖಾತೆಗೆ ಜಮಾ ಆಗಿ ಬಂದಿರುವ ಲಕ್ಷ ಲಕ್ಷ ಹಣದ ಮೂಲದ ಬಗ್ಗೆ ತನಿಖೆ ನಡೆಸಿ ನಿಜವಾದ ಷಡ್ಯಂತ್ರಕ್ಕೆ ಕಾರಣರಾಗಿರುವ ಎಲ್ಲರನ್ನು ಕಂಡು ಹಿಡಿದು ಕಠಿಣ ಶಿಕ್ಷೆಗೆ ಗುರಿಪಡಿಸಬೇಕು. ಈ ಮೂಲಕ ಶ್ರೀ ಧರ್ಮಸ್ಥಳ ಕ್ಷೇತ್ರದ ಪಾವಿತ್ರತೆಯನ್ನು ಉಳಿಸಬೇಕು ಎಂದು ಆಗ್ರಹಿಸಿದರು.

ಮಾಜಿ ಸಚಿವ ಕೆ.ಸಿ.ನಾರಾಯಣಗೌಡ ಮಾತನಾಡಿ ಪವಿತ್ರ ಧಾರ್ಮಿಕ ಸಂಸ್ಥೆ ಶ್ರೀ ಕ್ಷೇತ್ರ ಧರ್ಮಸ್ಥಳ ದೇವಾಲಯ ಹಾಗೂ ಪೂಜ್ಯರಾದ ಪದ್ಮವಿಭೂಷಣ ಡಿ.ವೀರೇಂದ್ರ ಹೆಗ್ಗಡೆಯವರ ಕುಟುಂಬಕ್ಕೆ ಕಳಂಕ ತರಲು ಷಡ್ಯಂತ್ರ ನಡೆಸುತ್ತಿರುವ ವಿರುದ್ಧ ಸೂಕ್ತ ತನಿಖೆ ನಡೆಸಬೇಕು. ಯಾರೋ ಅನಾಮಿಕ ಹೇಳಿದಾಕ್ಷಣ ಎಸ್.ಐ.ಟಿ ರಚನೆ ಮಾಡಿದ್ದರ ಉದ್ದೇಶವಾದರೂ ಏನು? ಎಂದು ಪ್ರಶ್ನಿಸಿದರು. ಹಿಂದೂಗಳ ಸಹನೆಯನ್ನು ಕೆಣಕುವುದನ್ನು ತಕ್ಷಣ ನಿಲ್ಲಿಸಬೇಕು.

15ಕಡೆ ಗುಂಡಿಗಳನ್ನು ಅಗೆದರೂ ಯಾವುದೇ ಕುರುಹುಗಳು ಸಿಕ್ಕಿಲ್ಲ. ಇದರಿಂದ ಎಲ್ಲರಿಗೂ ಅರ್ಥವಾಗುತ್ತದೆ. ಇನ್ನು ಎಷ್ಟೇ ಗುಂಡಿಗಳನ್ನು ಅಗೆದರೂ ಏನೂ ಸಿಗಲ್ಲ. ಏಕೆಂದರೆ ಧರ್ಮಸ್ಥಳ ಶ್ರೀ ಕ್ಷೇತ್ರದಲ್ಲಿ ಅಂತಹ ಯಾವುದೇ ಕೆಟ್ಟ ಕೆಲಸಗಳು ನಡೆದಿಲ್ಲ. ಆದರೂ ಸಹ ಧರ್ಮಸ್ಥಳ ಶ್ರೀ ಕ್ಷೇತ್ರದ ವಿರುದ್ಧ ಅಪಪ್ರಚಾರ ನಿಲ್ಲಿಸದೇ ಇದ್ದರೆ ಜನರೇ ದಂಗೆ ಏಳುವ ಕಾಲ ದೂರವಿಲ್ಲ ಎಂದು ಹೇಳಿದರು.

ಪುಟ 2ಕ್ಕೆ.....

## ಧರ್ಮಸ್ಥಳದ ವಿರುದ್ಧದ ಅಪಪ್ರಚಾರ ಖಂಡಿಸಿ ಬಿಜೆಪಿ ಕಾರು ರ್ಯಾಲಿಗೆ ಸ್ವಾಗತ



### ಧರ್ಮಸ್ಥಳ ಪವಿತ್ರತೆಗೆ ಕಳಂಕ ತರುವ ಪ್ರಯತ್ನ ಖಂಡನಾರ್ಹ – ಬಿಜೆಪಿ ನಾಯಕರ ಎಚ್ಚರಿಕೆ

ನೆಲಮಂಗಲ: ಧರ್ಮಸ್ಥಳದ ವಿರುದ್ಧ ಅಪಪ್ರಚಾರ ಖಂಡಿಸಿ ಬಿಜೆಪಿ ಪಕ್ಷದಿಂದ ನಡೆಸುತ್ತಿದ್ದು ಕಾರು ರ್ಯಾಲಿಗೆ ನಗರದಲ್ಲಿ ಅದ್ದೂರಿಯಾಗಿ ಸ್ವಾಗತಿಸಿದರು. ತಾಲೂಕಿನ ಹಂಚೀಪುರ ಗ್ರಾಮದ ಬಳಿಯ ರಾ.ಹೆದ್ದಾರಿ 75ರ ಲ್ಯಾಂಕೋ ಟೋಲ್ ಬಳಿ ಬಿಜೆಪಿ ತಾಲೂಕು ಅಧ್ಯಕ್ಷ ಜಗದೀಶ್‌ಚೌಧರಿ ನೇತೃತ್ವದಲ್ಲಿ ಸಮಾವೇಶಗೊಂಡ ಕ್ಷೇತ್ರದ ಜತೆಗೆ ಬ್ಯಾಟರಾಯನಪುರ ಹಾಗೂ ವಿವಿಧ ವಿಧಾನಸಭಾದಿಂದ ಬಿಜೆಪಿ ಪಕ್ಷದ ನೇತೃತ್ವದಲ್ಲಿ ದರ್ಮಸ್ಥಳಕ್ಕೆ ಆಗಮಿಕೊಂಡಿರುವ ಕಾರು ರ್ಯಾಲಿಗೆ ಅದ್ದೂರಿಯಾಗಿ ಸ್ವಾಗಿಸಿ ಬಳಿಕ ಬೀಳ್ಕೊಡಿಗೆ ನೀಡಿದರು.

ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹೆಚ್.ಸಿ.ತಮ್ಮೇಶ್‌ಗೌಡ ಮಾತನಾಡಿ ಅನಾಮಿಕ ವ್ಯಕ್ತಿಯನ್ನು ಬಳಸಿಕೊಂಡು ಧರ್ಮಸ್ಥಳದ ವಿರುದ್ಧ ಒಳಸಂಚು ನಡೆಸಲಾಗುತ್ತಿದೆ. ಕೆಲವರು ಸಾಮಾಜಿಕ ಜಾಲತಾಣದಲ್ಲಿ ದೇಗುಲದ ಪಾವಿತ್ರ್ಯತೆಗೆ ಕಳಂಕ ತರುವ ಕೆಲಸ ಮಾಡುತ್ತಿದ್ದಾರೆ. ಅದ್ದರೇ ರಾಜ್ಯ ಸರ್ಕಾರ ಅದನ್ನು ತಡೆಯುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ. ಸದ್ಯ ನಡೆಯುತ್ತಿರುವ ಎಸ್‌ಐಟಿ ತನಿಖೆಯನ್ನು ನಿಗದಿತ ಅವಧಿಯೊಳಗೆ ಮುಗಿಸಿ, ಎಲ್ಲ ರೀತಿಯ ಗೊಂದಲಗಳಿಗೆ ತೆರೆ ಎಳೆಯಬೇಕು. ಸಾಮಾಜಿಕ ಮಾಧ್ಯಮಗಳಲ್ಲಿ ನಡೆಯುತ್ತಿರುವ ಅಪಪ್ರಚಾರ ತಡೆಯಬೇಕು ಎಂದು ಒತ್ತಾಯಿಸಿದರು.

ಅನಾಮಿಕನಿಗೆ ರಾಜ ಮರ್ಯಾದೆ: ನೂರಾರು ಶವಗಳನ್ನು ಹೂತಿರುವುದಾಗಿ ಬಹಿರಂಗವಾಗಿ ಹೇಳಿದ್ದ ವ್ಯಕ್ತಿಯನ್ನು ಬಂಧಿಸಿ ವಿಚಾರ ನಡೆಸಬೇಕು. ಯಾರು ಆ ವ್ಯಕ್ತಿ, ಈ ಅರೋಪಕ್ಕೂ ಆ ವ್ಯಕ್ತಿಗೂ ಏನೂ ಸಂಬಂಧ ಎಂಬುದುನ್ನು ಮೊದಲಿ ತಿಳಿಸಬೇಕು. ಅದ್ದರೇ ರಾಜ್ಯ ಸರ್ಕಾರ ಅನಾಮಿಕ ವ್ಯಕ್ತಿಗೆ ರಾಜ ಮರ್ಯಾದೆ ನೀಡುತ್ತಿದೆ. ಕೂಡಲೇ ಇದ್ದರಿಂದೆ ಇರುವ ಕಾಣ ಕೈಗಳನ್ನು ಪತ್ತೆ ಮಾಡಿ ಧರ್ಮಸ್ಥಳ ವಿರುದ್ಧ ಮಾಡಿದ್ದ ಅಪಪ್ರಚಾರಕ್ಕೆ ತಕ್ಕ ಪಾಠ ಕಲಿಸುವ ಕೆಲಸ ರಾಜ್ಯ ಸರ್ಕಾರ ಮಾಡಬೇಕೆಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹೆಚ್.ಸಿ. ತಮ್ಮೇಶ್‌ಗೌಡ ತಿಳಿಸಿದರು.

ಬಿಜೆಪಿ ತಾಲೂಕು ಅಧ್ಯಕ್ಷ ಜಗದೀಶ್‌ಚೌಧರಿ ಮಾತನಾಡಿ ಮಂಜುನಾಥ ಸ್ವಾಮಿ ದೇವಾಲಯವು ನಾಡಿನ ಪುಣ್ಯ ಕ್ಷೇತ್ರಗಳಲ್ಲಿ ಒಂದಾಗಿದೆ. ಹಾಲಿ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರು ಸಾಕಷ್ಟು ಜನಪರ ಕಾಳಜಿಯೊಂದಿದ್ದು ಬಡವರ ಶ್ರೇಯೋಭಿವೃದ್ದೀಗೆ ಅನೇಕ ಕೆಲಸ ಮಾಡುತ್ತಿದ್ದಾರೆ. ಜತೆಗೆ ನಿತ್ಯ ದೇಗುಲಕ್ಕೆ ಆಗಮಿಸುವ 1 ಲಕ್ಷ ಜನರಿಗೆ ಅನ್ನದಾಸೋಹ ಮಾಡುತ್ತಿದ್ದಾರೆ. ಯಾವುದೇ ಮತ, ಭೇದವಿಲ್ಲದೆ ಎಲ್ಲರನ್ನೂ ಸಮಾನರಾಗಿ ಕಾಣುತ್ತಿದ್ದಾರೆ. ಆದರೆ, ಇದರ ವಿರುದ್ಧ ಇಲ್ಲಸಲ್ಲದ ಅಪಪ್ರಚಾರ ಮಾಡಲಾಗುತ್ತಿದ್ದು ಇದು ಖಂಡನಾರ್ಹ ಎಂದರು.

ಸಂದರ್ಭದಲ್ಲಿ ಬಿಜೆಪಿ ಗ್ರಾಮಾಂತರ ಜಿಲ್ಲಾದ್ಯಕ್ಷ ರಾಮಕೃಷ್ಣ , ರೈತ ಮೋರ್ಚಾ ಜಿಲ್ಲಾದ್ಯಕ್ಷ ಬ್ರಂಗೇಶ್, ಕೋಲಾರ ಜಿಲ್ಲಾದ್ಯಕ್ಷ ಓಂಛಲಪತಿ, ಪುರಸಭೆ ಮಾಜಿ ಅದ್ಯಕ್ಷ ರವಿ, ಬಿಜೆಪಿ ತಾಲೂಕು ಪ್ರಧಾನ ಕಾರ್ಯದರ್ಶಿ ಸತೀಶ್, ಮಹಿಳಾ ಮೋರ್ಚಾ ಪ್ರಧಾನ ಕಾರ್ಯದರ್ಶಿ ಶೀಲಾ, ಮುಖಂಡ ಗುಂಡೇನಹಳ್ಳಿ ಅರುಣ್, ರಮೇಶ್, ರಾಜಮ್ಮಪ್ರಕಾಶ್, ರಾಜು, ವಿನೋದ್ ಮತ್ತಿತರರು ಉಪಸ್ಥಿತರಿದ್ದರು.

## GBA ತಿದ್ದುಪಡಿ ವಿಧೇಯಕ ಪರಿಷತ್ ಅಂಗೀಕಾರ



### ಪಾಲಿಕೆಗಳ ಸ್ವಾಯತ್ತತೆ ಕಾಯ್ದುಕೊಂಡ ಸರ್ಕಾರ – ಡಿಕೆ ಶಿವಕುಮಾರ್ ಸ್ಪಷ್ಟನೆ

ಬೆಂಗಳೂರು: ಗ್ರೇಟರ್ ಬೆಂಗಳೂರು ಆಡಳಿತ ತಿದ್ದುಪಡಿ ವಿಧೇಯಕ 2025 ಕ್ಕೆ ವಿಧಾನ ಪರಿಷತ್ತಿನಲ್ಲಿ ಗುರುವಾರ ಅಂಗೀಕಾರ ದೊರೆಯಿತು.

ವಿಧಾನಸಭೆಯಲ್ಲಿ ಅಂಗೀಕೃತ ಸ್ವರೂಪದಲ್ಲಿರುವ ಗ್ರೇಟರ್ ಬೆಂಗಳೂರು ಆಡಳಿತ ತಿದ್ದುಪಡಿ ವಿಧೇಯಕ 2025' ಅನ್ನು ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮೇಲ್ಮನೆಯಲ್ಲಿ ಮಂಡಿಸಿದರು. ಅಲ್ಪಚರ್ಚೆ ಬಳಿಕ ಅನುಮೋದನೆ ನೀಡಲಾಯಿತು.

ತಿದ್ದುಪಡಿ ವಿಧೇಯಕದ ಪ್ರಸ್ತಾವನೆ ವೇಳೆ ಮಾತನಾಡಿದ ಶಿವಕುಮಾರ್ ಅವರು, “ಈ ವಿಧೇಯಕದಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರವು ಸಂವಿಧಾನದ 74ನೇ ತಿದ್ದುಪಡಿ ಅಡಿಯಲ್ಲಿ ಬರುವ ಪಾಲಿಕೆಗಳ ವಿಚಾರದಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂಬ ಅಂಶವನ್ನು ಸ್ಪಷ್ಟಪಡಿಸಲಾಗಿದೆ.

- ಪರಿಷತ್ತಿನಲ್ಲಿ ವಿಧೇಯಕ ಅಂಗೀಕಾರ
- ಪಾಲಿಕೆ ಸ್ವಾಯತ್ತತೆಗೆ ಭರವಸೆ
- ಜನಗಣತಿ ಆಧಾರಿತ ವಾರ್ಡ್‌ಗಳು
- ಹೊಸ ಪ್ರದೇಶ ಒಳಗೊಳ್ಳುವ ಭರವಸೆ
- ಶಾಸಕರ ಅಭಿಪ್ರಾಯ ಸಂಗ್ರಹ ಭರವಸೆ

ಭವಿಷ್ಯದಲ್ಲಿ ಯಾವುದೇ ಗೊಂದಲಕ್ಕೆ ಅವಕಾಶ ನೀಡಬಾರದು ಎಂಬ ಉದ್ದೇಶದಿಂದ ಈ ತಿದ್ದುಪಡಿಯಲ್ಲಿ ಜಿಬಿಎ ಪಾಲಿಕೆಗಳ ಆಡಳಿತದಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂಬ ಸ್ಪಷ್ಟನೆ ನೀಡಲಾಗಿದೆ” ಎಂದು ತಿಳಿಸಿದರು.

ಸದಸ್ಯರಾದ ಗೋವಿಂದರಾಜು, ಟಿ.ಎ ಶರವಣ, ಹೆಚ್.ಎಸ್ ಗೋಪಿನಾಥ್ ಅವರು ಕೋರಿದ ಸ್ಪಷ್ಟನೆಗೆ ಉತ್ತರ ನೀಡಿದ ಸಚಿವರು, “ನಾವು ಅನೇಕ ಬಾರಿ ನೋಡಿರುವಂತೆ ರಾಜ್ಯ ಸರ್ಕಾರ ಒಂದು ಪಕ್ಷ ಅಧಿಕಾರದಲ್ಲಿದ್ದರೆ, ಪಾಲಿಕೆಯಲ್ಲಿ ಮತ್ತೊಂದು ಪಕ್ಷ ಅಧಿಕಾರದಲ್ಲಿರುತ್ತದೆ.ಇಂತಹ ಸಂದರ್ಭದಲ್ಲಿ ಸಂವಿಧಾನದ 74ನೇ ತಿದ್ದುಪಡಿಗೆ ಧಕ್ಕೆಯಾಗದಂತೆ ಹಾಗೂ ರಾಜ್ಯ ಸರ್ಕಾರ ಪಾಲಿಕೆಗಳನ್ನು ನಿಯಂತ್ರಿಸುವಂತಾಗದಂತೆ ಎಚ್ಚರಿಕೆ ವಹಿಸಲು ಈ ತಿದ್ದುಪಡಿ ತರಲಾಗಿದೆ” ಎಂದರು.

“ಕೆಲವು ಶಾಸಕರು ಜನಸಂಖ್ಯೆ ಹಾಗೂ ವಾರ್ಡ್ ರಚನೆ ಬಗ್ಗೆ ಪ್ರಸ್ತಾಪ ಮಾಡಿದ್ದಾರೆ. ಈಗ ನಾವು ಬಳಸಿರುವುದು 2011ರ ಜನಗಣತಿ. ಆಗ ಒಂದು ವಾರ್ಡ್ ನಲ್ಲಿ 18 ಸಾವಿರ ಜನಸಂಖ್ಯೆ ಇದ್ದರೆ ಈಗಿನ ಪರಿಸ್ಥಿತಿಯಲ್ಲಿ 30 ಸಾವಿರದಷ್ಟು ಇರಲಿದೆ. ಮುಂದೆ ಹೊಸ ಪ್ರದೇಶಗಳನ್ನು ಪಾಲಿಕೆ ವ್ಯಾಪ್ತಿಯಲ್ಲಿ ಒಳಪಡಿಸುವ ಸಂದರ್ಭದಲ್ಲಿ ನಿಮ್ಮ ಪಕ್ಷದ ಶಾಸಕರ ಅಭಿಪ್ರಾಯವನ್ನು ಸಂಗ್ರಹಿಸಲಾಗುವುದು. ಈ ವಿಚಾರವನ್ನು ಬೇರೆ ರೂಪದಲ್ಲಿ ಚರ್ಚೆಗೆ ಪ್ರಸ್ತಾವನೆ ನೀಡಿ, ಆಗ ಈ ವಿಚಾರವಾಗಿ ನಿಮಗಿರುವ ಅನುಮಾನಗಳಿಗೆ ಸಂಪೂರ್ಣವಾಗಿ ವಿವರಣೆ ನೀಡುತ್ತೇನೆ. ಈಗ ಈ ವಿಧೇಯಕ ಅಂಗೀಕಾರ ಮಾಡಿಕೊಡಿ” ಎಂದು ತಿಳಿಸಿದರು.

## ಲಾರಿ ಡಿಕ್ಕಿ , ಬೈಕ್ ಸವಾರ ಸಾವು



ನೆಲಮಂಗಲ: ದ್ವಿಚಕ್ರ ವಾಹನಕ್ಕೆ ಲಾರಿ ಡಿಕ್ಕಿ ಹೊಡೆದು ಬೈಕ್ ಸವಾರ ಸ್ಥಳದಲ್ಲೇ ಮೃತ ಪಟ್ಟಿದ್ದು ಹಿಂಬದಿ ಸವಾರ ಗಂಭೀರವಾಗಿ ಗಾಯಗೊಂಡಿರುವ ಘಟನೆ ನಗರದ ಜಯನಗರ ಬಳಿ ನಡೆದಿದೆ. ನಗರದ ವಾಜರಹಳ್ಳಿ ಗ್ರಾಮದ ನಿವಾಸಿ ಅರುಣ್ ಕುಮಾರ್( 35) , ಮೃತ ಬೈಕ್ ಸವಾರ. ರವಿ (35) ಗಾಯಾಳು.

ಮೂಲತಃ ಹಾಸನ ಜಿಲ್ಲೆಯ ಬೇಲೂರಿನ ನಿವಾಸಿಯಾಗಿದ್ದ ಅರುಣ್‌ಕುಮಾರ್ ಕಳೆದ 20 ವರ್ಷದಿಂದ ಕುಟುಂಬದೊಂದಿಗೆ ವಾಜರಹಳ್ಳಿಯಲ್ಲಿ ವಾಸವಾಗಿದ್ದು. ಟಿವಿ ಡಿಸ್ ಸರ್ವಿಸ್ ಮಾಡುವ ಕೆಲಸ ಮಾಡಿಕೊಂಡಿದ್ದನು. ಆ.21ರಂದು ಗುರುವಾರ ಸಂಜೆ 4 ಗಂಟೆ ವೇಳೆಯಲ್ಲಿ ಕೆಲಸ ನಿಮಿತ್ತ ಅರುಣ್ ಹಾಗೂ ಸ್ನೇಹಿತ ರವಿಕುಮಾರ್ ಇಬ್ಬರು ರೇಣುಕಾನಗರಕ್ಕೆ ತೆರಳುತ್ತಿದ್ದ ವೇಳೆ ಮಾರ್ಗಮದ್ಯದ ಜಯನಗರ ಬಳಿ ಹಿಂಬದಿಯಿಂದ ಬಂದ ಲಾರಿಯೊಂದು ಅರುಣ್ ಸಂಚರಿಸುತ್ತಿದ್ದ ದ್ವಿಚಕ್ರವಾಹನಕ್ಕೆ ಡಿಕ್ಕಿ ಹೊಡೆದಿದೆ. ಡಿಕ್ಕಿ ಹೊಡೆದ ರಭಸಕ್ಕೆ ಸವಾರ ಅರುಣ್ ಕೆಳಕ್ಕೆ ಬಿದ್ದು ಲಾರಿಯ ಚಕ್ರ ದೇಹದ ಮೇಲೆ ಹರಿದು ಸ್ಥಳದಲ್ಲೇ ಮೃತ ಪಟ್ಟಿದ್ದಾನೆ. ಗಾಯಳು ರವಿಕುಮಾರ್ ನಗರದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ನಗರ ಸಂಚಾರಿ ಪೊಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## 2 ವರ್ಷದ ಮಗು ಸೇರಿದಂತೆ ಒಂದೇ ಕುಟುಂಬದ 5 ಮಂದಿ ಸಾವು

ಹೈದರಾಬಾದ್: ಒಂದೇ ಕುಟುಂಬದ ಐವರು ಸದಸ್ಯರು ಅನುಮಾನಾಸ್ಪದ ರೀತಿಯಲ್ಲಿ ಸಾವನ್ನಪ್ಪಿದ್ದಾರೆ. ಸೈಬರಾಬಾದ್ ಪೊಲೀಸ್ ಕಮಿಷನರೇಟ್‌ನ ಮಿಯಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿರುವ ಮಕ್ತ ಮಹಬೂಬ್ ಪೇಟೆಯಲ್ಲಿರುವ ಮನೆಯಲ್ಲಿ ದುರಂತ ಸಂಭವಿಸಿದೆ.ಮೃತರನ್ನು ನರಸಿಂಹ (60), ವೆಂಕಟಮ್ಮ (55), ಅನಿಲ್ (32), ಕವಿತಾ (24), ಮತ್ತು ಅಪ್ಪು (2) ಎಂದು ಗುರುತಿಸಲಾಗಿದೆ. ಕಲಬುರಗಿಯ ಲಕ್ಷ್ಮಯ್ಯ ಅವರ ಕುಟುಂಬವು ಕೆಲವು ಸಮಯದಿಂದ ಹೈದರಾಬಾದ್‌ನಲ್ಲಿ ವಾಸಿಸುತ್ತಿತ್ತು.

ನರಸಿಂಹ ಅವರಿಗೆ ಮೂವರು ಹೆಣ್ಣು ಮಕ್ಕಳಿದ್ದಾರೆ. ಏತನ್ಮಧ್ಯೆ, ನರಸಿಂಹ, ಅವರ ಪತ್ನಿ ವೆಂಕಟಮ್ಮ ಅವರ ಎರಡನೇ ಮಗಳು ಮತ್ತು ಅಳಿಯ ತಮ್ಮ ಮಗುವಿನೊಂದಿಗೆ ಮಕ್ತಾ ಮಹಬೂಬ್‌ಪೇಟೆಯಲ್ಲಿ ವಾಸಿಸುತ್ತಿದ್ದರು. ನರಸಿಂಹ ಸೇರಿದಂತೆ ಇಡೀ ಕುಟುಂಬವು ಕೂಲಿ ಕೆಲಸಗಳನ್ನು ಮಾಡುವ ಮೂಲಕ ಜೀವನ ಸಾಗಿಸುತ್ತಿತ್ತು.ನೆರೆಹೊರೆಯವರಿಂದ ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ಧಾವಿಸಿ ತನಿಖೆ ಆರಂಭಿಸಿದರು. ಸೈಬರಾಬಾದ್ ಪೊಲೀಸರ ಸುಳಿವುಗಳ ತಂಡ ಸ್ಥಳದಿಂದ ಸಾಕ್ಷ್ಯಗಳನ್ನು ಸಂಗ್ರಹಿಸುತ್ತಿತ್ತು.

ಅನಿಲ್ ಅವರ ಸ್ನೇಹಿತರೊಬ್ಬರು ಬುಧವಾರ ಸಂಜೆ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದ್ದರು, ಬಾಡಿಗೆಗೆ ಮನೆ ಸಿಕ್ಕಿದೆ ಮತ್ತು ಗುರುವಾರ ಸ್ಥಳಾಂತರಗೊಳ್ಳುವುದಾಗಿ ತಿಳಿಸಿದ್ದರು ಎಂದು ಹೇಳಿದರು. ಅನಿಲ್ ಕೂಡ ನಿರ್ಮಾಣ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದರು. ಕುಟುಂಬವು ಜೀವನೋಪಾಯಕ್ಕಾಗಿ ಮಾಡಿದ್ದ ಸಾಲ ತೀರಿಸಲು ಹೈದರಾಬಾದ್‌ಗೆ ಸ್ಥಳಾಂತರಗೊಂಡಿತ್ತು.

ಆರ್ಥಿಕ ಸಮಸ್ಯೆಗಳಿಂದಾಗಿ ಅವರು ಈ ತೀವ್ರ ಕ್ರಮ ತೆಗೆದುಕೊಂಡಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ಶವಪರೀಕ್ಷೆಯ ವರದಿ ಬಂದ ನಂತರ ಸಾವಿಗೆ ಕಾರಣ ತಿಳಿಯಲಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಪೊಲೀಸ್ ಠಾಣೆಯ ಶೌಚಾಲಯದಲ್ಲಿ ಕಳ್ಳನ ಆತ್ಮಹತ್ಯೆ

### ಚನ್ನಪಟ್ಟಣದಲ್ಲಿ ಬಂಧಿತ ಕಳ್ಳ ಶವವಾಗಿ ಪತ್ತೆ – ಲಾಕ್ ಅಪ್ ಡೆತ್ ಆರೋಪ

ಬೆಂಗಳೂರು: ದೇವಾಲಯಗಳು ಮತ್ತು ಅಂಗನವಾಡಿಯಲ್ಲಿ ಕಳ್ಳತನ ಮಾಡಿದ ಆರೋಪದ ಮೇಲೆ ಬಂಧಿಸಲ್ಪಟ್ಟ 59 ವರ್ಷದ ಕಳ್ಳನೊಬ್ಬ ಬುಧವಾರ ಎಂ.ಕೆ.ದೊಡ್ಡಿ ಪೊಲೀಸ್ ಠಾಣೆಯ ಶೌಚಾಲಯದಲ್ಲಿ ಶವವಾಗಿ ಪತ್ತೆಯಾಗಿರುವ ಘಟನೆ ಬೆಂಗಳೂರು ದಕ್ಷಿಣ ಜಿಲ್ಲೆಯ (ರಾಮನಗರ) ಚನ್ನಪಟ್ಟಣ ತಾಲ್ಲೂಕಿನಲ್ಲಿ ನಡೆದಿದೆ.

ಮೃತ ವ್ಯಕ್ತಿಯನ್ನು ಮಂಡ್ಯದ ಮದ್ದೂರಿನ ದುಂಡನಹಳ್ಳಿ ಮೂಲದ ರಮೇಶ್ ಎಂದು ಗುರುತಿಸಲಾಗಿದೆ. ಶೌಚಾಲಯದಲ್ಲಿ ರಮೇಶ್ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾನೆ. ಈತ ತನ್ನ ಪಂಚೆ ಬಳಸಿ ಈ ಕೃತ್ಯ ಎಸಗಿದ್ದಾನೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಚನ್ನಪಟ್ಟಣ ಸರ್ಕಾರಿ ಆಸ್ಪತ್ರೆಯ ಶವಾಗಾರಕ್ಕೆ ಸ್ಥಳಾಂತರಿಸಲಾಗಿದೆ. ರಮೇಶ್ ಅವರ ಪುತ್ರಿಯರಾದ ಆಶಾ ಮತ್ತು ಉಷಾ ತಮ್ಮ ತಂದೆಯ ಸಾವಿಗೆ ಪೊಲೀಸರೇ ಕಾರಣ ಎಂದು ಆರೋಪಿಸಿದ್ದಾರೆ.

ಲಾಕ್ ಅಪ್ ಡೆತ್ ಆರೋಪವನ್ನು ಹಿರಿಯ ಪೊಲೀಸ್ ಅಧಿಕಾರಿಗಳು ತಳ್ಳಿಹಾಕಿದ್ದಾರೆ. ಬೊಮ್ಮನಾಯಕನಹಳ್ಳಿಯ ಬೀರೇಶ್ವರ ಮತ್ತು ಮಹದೇಶ್ವರ ದೇವಾಲಯಗಳಿಂದ ನಗದು, ಬೆಳ್ಳಿ ಆಭರಣಗಳು ಮತ್ತು ಅಂಗನವಾಡಿಯಿಂದ ಗ್ಯಾಸ್ ಸಿಲಿಂಡರ್ ಕದ್ದ ಆರೋಪ ಸಂತ್ರಸ್ತ ವ್ಯಕ್ತಿ ಮೇಲಿತ್ತು. ಈ ವ್ಯಕ್ತಿಯನ್ನು ಅವರ ಮಗ ಮತ್ತು ಇನ್ನೊಬ್ಬ ವ್ಯಕ್ತಿಯೊಂದಿಗೆ ಬಂಧಿಸಲಾಗಿತ್ತು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

ಡಿಜಿಟಲ್ ವಾರ್ತೆ

# ಲೋಕಸಭೆಯಲ್ಲಿ 12, ರಾಜ್ಯಸಭೆಯಲ್ಲಿ 15 ಮಸೂದೆ ಅಂಗೀಕಾರ

ನವದೆಹಲಿ: ಒಂದು ತಿಂಗಳ ಕಾಲ ನಡೆದ ಸಂಸತ್ ಮುಂಗಾರು ಅಧಿವೇಶನಕ್ಕೆ ಗುರುವಾರ ತೆರೆ ಬಿದಿದ್ದು, ಪ್ರತಿಪಕ್ಷಗಳ ಪ್ರತಿಭಟನೆ, ಮುಂದೂಡಿಕೆ ಮತ್ತು ಸಭಾತ್ಯಾಗದ ನಡುವೆಯೇ ಲೋಕಸಭೆಯಲ್ಲಿ ಹನ್ನೆರಡು ಮಸೂದೆಗಳು ಮತ್ತು ರಾಜ್ಯಸಭೆಯಲ್ಲಿ 15 ಮಸೂದೆಗಳನ್ನು ಅಂಗೀಕರಿಸಲಾಗಿದೆ.

ಈ ಬಾರಿಯ ಮುಂಗಾರು ಅಧಿವೇಶನ ಜುಲೈ 21 ರಂದು ಆರಂಭವಾಯಿತು. ಎರಡೂ ಸದನಗಳಲ್ಲಿ ಆಪರೇಷನ್ ಸಿಂಧೂರ್ ಕುರಿತ ಚರ್ಚೆ ಹೊರತುಪಡಿಸಿ, ಇತರ ಯಾವುದೇ ವಿಷಯದ ಬಗ್ಗೆ ಚರ್ಚೆ ನಡೆಯಲೇ ಇಲ್ಲ. ಆಪರೇಷನ್ ಸಿಂಧೂರ್ ಕುರಿತು ಚರ್ಚೆಗೆ ಆರಂಭದಲ್ಲಿ ಒತ್ತಾಯಿಸಿದ್ದ ವಿರೋಧ ಪಕ್ಷಗಳು, ನಂತರ ಬಿಹಾರದಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಚರ್ಚೆಗೆ ಆಗ್ರಹಿಸಿ ಪ್ರತಿಭಟನೆ ಮುಂದುವರೆಸಿದವು. ಪ್ರತಿಪಕ್ಷಗಳ ನಿರಂತರ ಪ್ರತಿಭಟನೆ ಮತ್ತು ಗದ್ದಲದ ನಡುವೆ ಸಂಸತ್ ಮಾನ್ಸೂನ್ ಅಧಿವೇಶನ ಇಂದು ಮುಕ್ತಾಯಗೊಂಡಿತು.

ಲೋಕಸಭೆ ಅಂಗೀಕರಿಸಿದ ಮಸೂದೆಗಳು: ಲೋಕಸಭೆಯಲ್ಲಿ ಗೋವಾ ವಿಧಾನಸಭಾ ಕ್ಷೇತ್ರಗಳಲ್ಲಿ ಪರಿಶಿಷ್ಟ ಪಂಗಡಗಳ ಪ್ರಾತಿನಿಧ್ಯದ ಮರುಹೊಂದಾಣಿಕೆ ಮಸೂದೆ, 2025, ಮರ್ಚೆಂಟ್ ಶಿಪ್ಪಿಂಗ್ ಮಸೂದೆ, 2025, ಮಣಿಪುರ ಸರಕು ಮತ್ತು ಸೇವಾ ತೆರಿಗೆ (ತಿದ್ದುಪಡಿ) ಮಸೂದೆ 2025, ಮಣಿಪುರ ವಿನಿಯೋಗ (ಸಂ.2) ಮಸೂದೆ 2025, ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆ 2025 ಮತ್ತು ರಾಷ್ಟ್ರೀಯ ಡೋಪಿಂಗ್ ವಿರೋಧಿ(ತಿದ್ದುಪಡಿ) ಮಸೂದೆ 2025, ಆದಾಯ ತೆರಿಗೆ ಮಸೂದೆ 2025, ತೆರಿಗೆ ಕಾನೂನುಗಳು(ತಿದ್ದುಪಡಿ) ಮಸೂದೆ, 2025, ಭಾರತೀಯ ಬಂದರು ಮಸೂದೆ 2025 ಮತ್ತು ಆನ್‌ಲೈನ್ ಗೇಮಿಂಗ್‌ನ ಪ್ರಚಾರ ಮತ್ತು ನಿಯಂತ್ರಣ ಮಸೂದೆ 2025 ಸೇರಿದಂತೆ 12 ಮಸೂದೆಗಳನ್ನು ಅಂಗೀಕರಿಸಲಾಯಿತು.

ರಾಜ್ಯಸಭೆ ಅಂಗೀಕರಿಸಿದ ಮಸೂದೆಗಳು: ಸರಕು ಸಾಗಣೆ ಮಸೂದೆ 2025, ಸಮುದ್ರದ ಮೂಲಕ ಸರಕುಗಳ ಸಾಗಣೆ ಮಸೂದೆ 2025, ಕರಾವಳಿ ಸಾಗಣೆ ಮಸೂದೆ 2025, ಮಣಿಪುರ ಸರಕು ಮತ್ತು ಸೇವಾ ತೆರಿಗೆ(ತಿದ್ದುಪಡಿ) ಮಸೂದೆ 2025, ಮಣಿಪುರ ವಿನಿಯೋಗ (ಸಂ.2) ಮಸೂದೆ 2025, ವ್ಯಾಪಾರಿ ಸಾಗಣೆ ಮಸೂದೆ 2025 ಮತ್ತು ಗೋವಾ ವಿಧಾನಸಭಾ ಕ್ಷೇತ್ರಗಳಲ್ಲಿ ಪರಿಶಿಷ್ಟ ಪಂಗಡಗಳ ಪ್ರಾತಿನಿಧ್ಯದ ಮರು ಹೊಂದಾಣಿಕೆ ಮಸೂದೆ 2025, ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆ 2025, ರಾಷ್ಟ್ರೀಯ ಡೋಪಿಂಗ್ ವಿರೋಧಿ(ತಿದ್ದುಪಡಿ) ಮಸೂದೆ 2025, ಆದಾಯ ತೆರಿಗೆ ಮಸೂದೆ 2025, ತೆರಿಗೆ ಕಾನೂನುಗಳು(ತಿದ್ದುಪಡಿ) ಮಸೂದೆ 2025, ಭಾರತೀಯ ಬಂದರು ಮಸೂದೆ 2025, ಗಣಿ ಮತ್ತು ಖನಿಜಗಳು(ಅಭಿವೃದ್ಧಿ ಮತ್ತು ನಿಯಂತ್ರಣ) ತಿದ್ದುಪಡಿ ಮಸೂದೆ 2025, ಭಾರತೀಯ ನಿರ್ವಹಣಾ ಸಂಸ್ಥೆಗಳ(ತಿದ್ದುಪಡಿ) ಮಸೂದೆ 2025 ಮತ್ತು ಆನ್‌ಲೈನ್ ಗೇಮಿಂಗ್‌ನ ಪ್ರಚಾರ ಮತ್ತು ನಿಯಂತ್ರಣ ಮಸೂದೆ, 2025.

# ಜಮ್ಮು ರೈಲು ನಿಲ್ದಾಣ ಸ್ಫೋಟಿಸುವ ಸಂದೇಶ: ಪಾರಿವಾಳ ಸೆರೆ



ಜಮ್ಮು: ಜಮ್ಮು ಜಿಲ್ಲೆಯ ಆರ್‌ಎಸ್ ಪುರ ಗಡಿ ಪ್ರದೇಶದಲ್ಲಿರುವ ಜಮ್ಮು ರೈಲು ನಿಲ್ದಾಣವನ್ನು ಸ್ಫೋಟಿಸುವ ಬೆದರಿಕೆ ಪತ್ರವನ್ನು ಹೊತ್ತಿದ್ದ ಪಾರಿವಾಳವನ್ನು ಭದ್ರತಾ ಪಡೆಗಳು ಸೆರೆಹಿಡಿದಿದ್ದು, ಈ ಪ್ರದೇಶದಲ್ಲಿ ಪೊಲೀಸರು ಭದ್ರತೆಯನ್ನು ಹೆಚ್ಚಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪಾಕಿಸ್ತಾನ ಅಂತರರಾಷ್ಟ್ರೀಯ ಗಡಿಯ (ಐಬಿ) ಭಾರತದ ಭಾಗಕ್ಕೆ ವಿವಿಧ ಸಂದೇಶಗಳನ್ನು ಹೊತ್ತ ಬಲೂನ್‌ಗಳು, ಧ್ವಜಗಳು ಮತ್ತು ಪಾರಿವಾಳಗಳನ್ನು ಕಳುಹಿಸುತ್ತಿದೆ ಎಂದು ತಿಳಿದುಬಂದಿದೆ, ಆದರೆ ಬೆದರಿಕೆ ಪತ್ರವನ್ನು ಹೊತ್ತ ಪಾರಿವಾಳವನ್ನು ಸೆರೆಹಿಡಿಯುತ್ತಿರುವುದು ಇದೇ ಮೊದಲು ಎಂದು ಅವರು ಹೇಳಿದರು.

ಈಗಾಗಲೇ ಇರುವ ಬೆದರಿಕೆ ಗ್ರಹಿಕೆಗಳು ಮತ್ತು ಭಾರತ ವಿರೋಧಿ ಉದ್ದೇಶಗಳ ಹಿನ್ನೆಲೆಯಲ್ಲಿ ಭದ್ರತಾ ಸಂಸ್ಥೆಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿವೆ. ಆಗಸ್ಟ್ 18 ರಂದು ರಾತ್ರಿ 9 ಗಂಟೆ ಸುಮಾರಿಗೆ ಅಂತರರಾಷ್ಟ್ರೀಯ ಗಡಿಯ ಕಟ್ಮರಿಯಾ ಪ್ರದೇಶದಲ್ಲಿ ಪಾಕಿಸ್ತಾನದಿಂದ ಬರುತ್ತಿದೆ ಎಂದು ನಂಬಲಾದ ಪಾರಿವಾಳವನ್ನು ಹಿಡಿಯಲಾಗಿದೆ. ಜಮ್ಮು ರೈಲು ನಿಲ್ದಾಣವನ್ನು ಸ್ಫೋಟಿಸುವ ಸಂದೇಶವನ್ನು ಹೊತ್ತ ಚೀಟಿಯನ್ನು ಅದರ ಉಗುರುಗಳಿಗೆ ಕಟ್ಟಲಾಗಿತ್ತು," ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಮೂಲಗಳ ಪ್ರಕಾರ, ಕಾಶ್ಮೀರ ಸ್ವಾತಂತ್ರ್ಯ, ಸಮಯ ಬಂದಿದೆ ಇತ್ಯಾದಿ ಸಾಲುಗಳನ್ನು ಹೊಂದಿರುವ ಐಇಡಿಯೊಂದಿಗೆ ಜಮ್ಮು ರೈಲು ನಿಲ್ದಾಣವನ್ನು ಸ್ಫೋಟಿಸುವಂತೆ ಉರ್ದು ಮತ್ತು ಇಂಗ್ಲಿಷ್‌ನಲ್ಲಿ ಬೆದರಿಕೆ ಸಂದೇಶವನ್ನು ಚಿಟ್‌ನಲ್ಲಿ ಹೊಂದಿತ್ತು.

ಇದು ಕಿಡಿಗೇಡಿತನದ ಕೃತ್ಯವೇ ಅಥವಾ ಯೋಜಿತ ಪಿತೂರಿಯೇ ಎಂದು ಭದ್ರತಾ ಸಂಸ್ಥೆಗಳು ತನಿಖೆ ನಡೆಸುತ್ತಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆದಾಗ್ಯೂ, ಯಾವುದೇ ಅವಕಾಶವನ್ನು ತೆಗೆದುಕೊಳ್ಳದೆ, ಪಡೆಗಳು ರೈಲ್ವೆ ನಿಲ್ದಾಣ ಮತ್ತು ಹಳಿಗಳ ಸುತ್ತಲೂ ಭದ್ರತೆಯನ್ನು ಹೆಚ್ಚಿಸಿವೆ. ಶ್ವಾನ ದಳ ಮತ್ತು ಬಾಂಬ್ ನಿಷ್ಕ್ರಿಯ ತಂಡಗಳನ್ನು ನಿಯೋಜಿಸಲಾಗಿದೆ, ಸ್ಥಳೀಯ ಪೊಲೀಸರು ಹೆಚ್ಚಿನ ಎಚ್ಚರಿಕೆ ವಹಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಭದ್ರತಾ ತಜ್ಞರ ಪ್ರಕಾರ, ಪಾರಿವಾಳವನ್ನು ವಿಶೇಷವಾಗಿ ತರಬೇತಿ ನೀಡಿ ಗಡಿಯಾಚೆಯಿಂದ ಅದರ ಉಗುರುಗಳಿಗೆ ಬೆದರಿಕೆ ಸಂದೇಶವನ್ನು ಕಟ್ಟಿ ಬಿಡುಗಡೆ ಮಾಡಿರಬಹುದು. ನೀವು ಅಂತಹ ವಿಷಯಗಳನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ತಜ್ಞರು ಹೇಳಿದ್ದಾರೆ.

# ಮಹೇಶ್ ಶೆಟ್ಟಿ ತಿಮರೋಡಿಗೆ 14 ದಿನ ನ್ಯಾಯಾಂಗ ಬಂಧನ

ಉಡುಪಿ: ಧರ್ಮಸ್ಥಳ ವಿಚಾರಕ್ಕೆ ಸಂಬಂಧಿಸಿದಂತೆ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ(ಸಂಘಟನೆ) ಬಿ ಎಲ್ ಸಂತೋಷ್ ಅವರ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಮತ್ತು ಅಶ್ಲೀಲ ಭಾಷೆ ಬಳಸಿದ ಆರೋಪದ ಮೇಲೆ ಬ್ರಹ್ಮಾವರ ಪೊಲೀಸರು ಗುರುವಾರ ಹೋರಾಟಗಾರ ಮಹೇಶ್ ಶೆಟ್ಟಿ ತಿಮರೋಡಿಯನ್ನು ಬಂಧಿಸಿದ್ದಾರೆ.



ಇಂದು ಬೆಳಗ್ಗೆ ಮಹೇಶ್ ಶೆಟ್ಟಿಯನ್ನು ಉಜಿರೆಯ ಅವರ ನಿವಾಸದಲ್ಲಿ ವಶಕ್ಕೆ ಪಡೆದಿದ್ದ ಪೊಲೀಸರು ಉಡುಪಿಯ ಬ್ರಹ್ಮಾವರ ಪೊಲೀಸ್ ಠಾಣೆಗೆ ಕರೆತಂದಿದ್ದರು. ಬಳಿಕ ಮಧ್ಯಾಹ್ನ ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿ ಬ್ರಹ್ಮಾವರ ತಾಲೂಕು ಕೋರ್ಟ್‌ಗೆ ಹಾಜರು ಪಡಿಸಿದರು.

ಆರೋಪಿಯ ವಿಚಾರಣೆ ನಡೆಸಿದ ಕೋರ್ಟ್, ಜಾಮೀನು ನೀಡಲು ನಿರಾಕರಿಸಿದ್ದು, 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ಮಹೇಶ್ ಶೆಟ್ಟಿಯ ಜಾಮೀನು ಅರ್ಜಿಯ ವಿಚಾರಣೆ ಅಗಸ್ಟ್ 23ಕ್ಕೆ ನಡೆಯಲಿದೆ.

ಇದು ಜಾಮೀನು ರಹಿತ ಅಪರಾಧವಾಗಿದೆ ಮತ್ತು ವಿಚಾರಣೆಗೆ ಬ್ರಹ್ಮಾವರ ಪೊಲೀಸ್ ಠಾಣೆಗೆ ಬರುವಂತೆ ಸೂಚಿಸಿದ್ದ ಎರಡು ಪೊಲೀಸ್ ನೋಟಿಸ್‌ಗಳನ್ನು ತಿಮರೋಡಿ ನಿರ್ಲಕ್ಷಿಸಿದ್ದಾರೆ ಎಂದು ಉಡುಪಿ ಎಸ್ಪಿ ಹರಿರಾಮ್ ಶಂಕರ್ ಅವರು ಹೇಳಿದ್ದಾರೆ.

ತಿಮರೋಡಿ ಅವರ ಹೇಳಿಕೆಗಳು ಸಾರ್ವಜನಿಕ ಸುವ್ಯವಸ್ಥೆಗೆ ಧಕ್ಕೆ ತರುವ ಮತ್ತು ಭಾವನೆಗಳಿಗೆ ನೋವುಂಟು ಮಾಡುವ ಸಾಮರ್ಥ್ಯವನ್ನು ಹೊಂದಿವೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಈ ಮಧ್ಯೆ, ಉಡುಪಿ ಜಿಲ್ಲಾಧಿಕಾರಿ ಸ್ವರೂಪ ಟಿ ಕೆ ಅವರು ಗುರುವಾರ ಮಧ್ಯಾಹ್ನ 1 ಗಂಟೆಯಿಂದ ಶುಕ್ರವಾರ ಮಧ್ಯಾಹ್ನ 1 ಗಂಟೆಯವರೆಗೆ ಕಾನೂನುಬಾಹಿರ ಸಭೆ ನಡೆಸುವುದನ್ನು ತಡೆಯಲು ಬ್ರಹ್ಮಾವರ ಪೊಲೀಸ್ ಠಾಣೆಯ 500 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ವಿಧಿಸಿದ್ದಾರೆ.

ಗುರುವಾರ, ತಿಮರೋಡಿ ಬಂಧನವನ್ನು ವಿರೋಧಿಸಿ ತಿಮರೋಡಿ ಬೆಂಬಲಿಗರು ಬ್ರಹ್ಮಾವರ ಪೊಲೀಸ್ ಠಾಣೆಯ ಮುಂದೆ ಜಮಾಯಿಸಿದ್ದರು.

ಆಗಸ್ಟ್ 16 ರಂದು ತಿಮರೋಡಿ ಬಿಜೆಪಿ ನಾಯಕ ಬಿ ಎಲ್ ಸಂತೋಷ್ ವಿರುದ್ಧ ಅವಹೇಳನಕಾರಿ ಹೇಳಿಕೆ ಮತ್ತು ಅಶ್ಲೀಲ ಭಾಷೆ ಬಳಸಿದ್ದಾರೆ ಎಂಬ ಫೇಸ್‌ಬುಕ್ ಪೋಸ್ಟ್ ಅನ್ನು ಆಧರಿಸಿ ಪ್ರಕರಣ ದಾಖಲಾಗಿತ್ತು.

# ಮಂಡ್ಯದ ಕೆ.ಆರ್ ಪೇಟೆಯಲ್ಲಿ ಪ್ರತಿಭಟನೆ

ತೆಂಡೇಕೆರೆ ಬಾಳೆಹೊನ್ನೂರು ಶಾಖಾ ಮಠದ ಶ್ರೀ ಗಂಗಾಧರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ ಸುಮಾರು 800ವರ್ಷಗಳ ಇತಿಹಾಸವನ್ನು ಹೊಂದಿರುವ ಶ್ರೀ ಧರ್ಮಸ್ಥಳ ಶ್ರೀ ಕ್ಷೇತ್ರದಲ್ಲಿ ಕಳೆದ ಕೆಲವು ವರ್ಷಗಳಿಂದ ಗಿರೀಶ್ ಮಟ್ಟಣ್ಣವರ್, ಮಹೇಶ್ ಶೆಟ್ಟಿ ತಿಮ್ಮರೋಡಿ, ಸಮೀರ್, ಸಂತೋಷ್ ಶೆಟ್ಟಿ, ಜಯಂತ್, ಅಜಯ್ ಅಂಚನ್ ಸೇರಿದಂತೆ ಇತರರು ಧರ್ಮಸ್ಥಳ ಮಂಜುನಾಥೇಶ್ವರ ಹಾಗೂ ಡಿ ವೀರೇಂದ್ರ ಹೆಗ್ಗಡೆ ಕುಟುಂಬವನ್ನು ಕೀಳು ಮಟ್ಟದ ಭಾಷೆಯನ್ನು ಉಪಯೋಗಿಸಿ ವೀಡಿಯೋ ತುಣುಕುಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡುತ್ತಿರುವುದು ಕೋಟ್ಯಾಂತರ ಭಕ್ತರ ಧಾರ್ಮಿಕ ಭಾವನೆಗಳಿಗೆ ದಕ್ಕೆಯಾಗಿದೆ. ಅನಾಮಿಕನ ಮಾತು ಕೇಳಿ ಕಂಡಕಂಡಲ್ಲಿ ಅಗೆದು ಶ್ರೀ ಧರ್ಮಸ್ಥಳ ಕ್ಷೇತವನ್ನು ಮಲಿನ ಮಾಡಲು ಪ್ರಯತ್ನಿಸಲಾಗುತ್ತಿದೆ. ಮಂಜುನಾಥಸ್ವಾಮಿಯ ಕೃಫೆಯಿಂದ 18ಕಡೆ ಅಗೆದರೂ ಇದೆಲ್ಲ ಸುಳ್ಳು ಎಂಬುದು ಸಾಬೀತಾಗಿದೆ. ಹಾಗಾಗಿ ಶ್ರೀ ಧರ್ಮಸ್ಥಳ ಕ್ಷೇತ್ರದ ವಿರುದ್ಧ ಸುಳ್ಳು ಸುದ್ದಿ ಪ್ರಚಾರ ಮಾಡುತ್ತಿರುವ ಕಿಡಿಗೇಡಿಗಳು ಹಾಗೂ ಯೂಟ್ಯೂಬರ್‌ಗಳ ವಿರುದ್ಧ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ಸರ್ಕಾರವನ್ನು ಆಗ್ರಹಿಸಿದರು.

ಪ್ರತಿಭಟನೆಯ ನಂತರ ತಹಸೀಲ್ದಾರ್ ಎಸ್.ಯು.ಅಶೋಕ್ ಅವರಿಗೆ ಮನವಿ ಸಲ್ಲಿಸಲಾಯಿತು,

ಈ ಸಂದರ್ಭದಲ್ಲಿ ಶಾಸಕ ಹೆಚ್.ಟಿ.ಮಂಜು, ಮಾಜಿ ಸಚಿವ ಕೆ.ಸಿ.ನಾರಾಯಣಗೌಡ, ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಆರ್.ಟಿ.ಓ ಮಲ್ಲಿಕಾರ್ಜುನ್, ಕೆ.ಶ್ರೀನಿವಾಸ್, ಅಕ್ಕಿಹೆಬ್ಬಾಳು ರಘು, ಜ್ಯೋತಿ ದೇವರಾಜು, ಮೊಟ್ಟೆ ಮಂಜು, ಕೆ.ಎಸ್.ರಾಜೇಶ್, ಕೆ.ಕಾಳೇಗೌಡ, ಕೆ.ಜಿ.ತಮ್ಮಣ್ಣ, ತೋಟಪ್ಪಶೆಟ್ಟಿ, ಸುಜೇಂದ್ರಕುಮಾರ್, ಎಸ್.ಎಲ್.ಮೋಹನ್, ಕೆ.ಎನ್.ಕುಮಾರಸ್ವಾಮಿ, ಗಂಜಿಗೆರೆ, ನಿರಂಜನ್, ಹಿಂದು ಮಹಾಸಭಾ ವೇದಿಕೆಯ ಮುಖಂಡ ಹರೀಶ್, ಶ್ರೀಮತಿ ನಳಿನಿ, ಜೈಹಿಂದ್ ನಾಗಣ್ಣ, ಶಿವಪ್ಪ, ಬ್ಯಾಂಕ್ ಪರಮೇಶ್, ಆರ್.ಜಗದೀಶ್, ಚೋಕನಹಳ್ಳಿ ಪ್ರಕಾಶ್, ರೂಪೇಶಾಚಾರ್, ಸೇರಿದಂತೆ ಸಾವಿರಾರು ಮಂದಿ ಪ್ರತಿಭಟನಾಕಾರರು ಭಾಗವಹಿಸಿದ್ದರು.

# ಧರ್ಮಸ್ಥಳ ಪ್ರಕರಣ: ಬೆಂಗಳೂರಿನಲ್ಲಿ ಸಾಹಿತಿಗಳು, ಚಿಂತಕರ ಸಭೆ



ಬೆಂಗಳೂರು: ಧರ್ಮ ಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ದಿನದಿಂದ ದಿನಕ್ಕೆ ಹೊಸ ಬೆಳವಣಿಗೆಗಳು ಆಗುತ್ತಿರುವಂತೆಯೇ ಬೆಂಗಳೂರಿನಲ್ಲಿ ಸಾಹಿತಿಗಳು, ಚಿಂತಕರು ಸಭೆ ಗುರುವಾರ ಸಭೆ ನಡೆಸಿದ್ದಾರೆ.

ಅಲುಮ್ನಿ ಹಾಲ್ ನಲ್ಲಿ ನಡೆದ ಸಭೆಯಲ್ಲಿ ಚಿಂತಕರಾದ ಶಿವಶಂಕರ್, ಹಿಂದುಳಿದ ವರ್ಗಗಳ ಆಯೋಗದ ಮಾಜಿ ಅಧ್ಯಕ್ಷ ಸಿ. ಎಸ್. ದ್ವಾರಕನಾಥ್, ನಟ ಚೇತನ್ ಅಹಿಂಸಾ ಮತ್ತಿತರರು ಭಾಗಿಯಾಗಿದ್ದರು. ಧರ್ಮಸ್ಥಳದಲ್ಲಿ ನಡೆದಿದೆ ಎನ್ನಲಾದ ದೌರ್ಜನ್ಯ, ಅತ್ಯಾಚಾರ, ಕೊಲೆ, ಭೂಕಬಳಿಕೆ, ಮೈಕ್ರೋಫೈನಾನ್ಸ್ ಹೋರಾಟಗಾರರ ಬಂಧನ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಧರ್ಮಸ್ಥಳ ವಿಚಾರವಾಗಿ ಆಕ್ಷೇಪಾರ್ಹರ ಹೇಳಿಕೆ ನೀಡಿದ ಪ್ರಕರಣದಲ್ಲಿ ಉಡುಪಿ ಪೊಲೀಸರು ಮಹೇಶ್ ಶೆಟ್ಟಿ ತಿಮರೋಡಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಮತ್ತೊಂದೆಡೆ ಧರ್ಮಸ್ಥಳದಲ್ಲಿ ನಡೆದಿದೆ ಎನ್ನಲಾದ ಅಪರಾಧ ಕೃತ್ಯಗಳ ಕುರಿತು AI ವಿಡಿಯೋ ಮಾಡಿ, ಬಂಧನ ಭೀತಿಯಲ್ಲಿದ್ದ ಯುಟ್ಯೂಬರ್ ಎಂಡಿ ಸಮೀರ್‌ಗೆ ದಕ್ಷಿಣ ಕನ್ನಡ ಜಿಲ್ಲಾ ನ್ಯಾಯಾಲಯ ಗುರುವಾರ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ. ಧರ್ಮಸ್ಥಳ ವಿರುದ್ಧ ವಿಡಿಯೋ ಮೂಲಕ ಅಪಪ್ರಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಧರ್ಮಸ್ಥಳ ಪೊಲೀಸರು ಜುಲೈ 12ರಂದು ಸಮೀರ್ ವಿರುದ್ಧ ಸುಮೋಟೋ ಕೇಸ್ ದಾಖಲಿಸಿಕೊಂಡಿದ್ದರು. ಅಲ್ಲದೆ ಸಮೀರ್‌ನನ್ನು ವಶಕ್ಕೆ ಪಡೆಯಲು ಧರ್ಮಸ್ಥಳ ಪೊಲೀಸರು ಇಂದು ಬನ್ನೇರುಘಟ್ಟದ ನಿವಾಸಕ್ಕೆ ಆಗಮಿಸಿದ್ದರು. ಈ ಮಧ್ಯೆ, ಆಗಸ್ಟ್ 19 ರಂದು ಜಾಮೀನು ಕೋರಿ ಸಮೀರ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ದಕ್ಷಿಣ ಕನ್ನಡ ಜಿಲ್ಲಾ ನ್ಯಾಯಾಲಯ, ಇಂದು ಆರೋಪಿಗೆ ಜಾಮೀನು ನೀಡಿ ಆದೇಶ ಹೊರಡಿಸಿದೆ. ಇದರೊಂದಿಗೆ ಸಮೀರ್ ಬಂಧನದಿಂದ ಪಾರಾಗಿದ್ದಾರೆ.

ಈ ಎಲ್ಲಾ ಬೆಳವಣಿಗೆಗಳ ನಡುವೆ ಬೆಂಗಳೂರಿನಲ್ಲಿ ಸಾಹಿತಿಗಳು, ಚಿಂತಕರು ಸಭೆ ನಡೆಸಿರುವುದು ಭಾರಿ ಕುತೂಹಲಕ್ಕೆ ಎಡೆಮಾಡಿಕೊಟ್ಟಿದೆ.

# ರೇಖಾ ಗುಪ್ತಾಗೆ ‘Z’ ಶ್ರೇಣಿಯ ವಿಐಪಿ ಭದ್ರತೆ!

ನವದೆಹಲಿ: ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರ ಮೇಲೆ ವ್ಯಕ್ತಿಯೊಬ್ಬ ಹಲ್ಲೆ ನಡೆಸಿದ ನಂತರ ಕೇಂದ್ರ ಸರ್ಕಾರ ಅವರಿಗೆ ‘ಝಡ್’ ಶ್ರೇಣಿಯ ವಿಐಪಿ ಭದ್ರತೆಯನ್ನು ಒದಗಿಸಿದೆ ಎಂದು ಅಧಿಕೃತ ಮೂಲಗಳು ಗುರುವಾರ ತಿಳಿಸಿವೆ.

ರೇಖಾ ಗುಪ್ತಾ, ಅವರ ಅಧಿಕೃತ ನಿವಾಸ ಮತ್ತು ರಾಷ್ಟ್ರ ರಾಜಧಾನಿಯ ಸಿವಿಲ್ ಲೈನ್ಸ್ ಪ್ರದೇಶದ ರಾಜ್ ನಿವಾಸ್ ಮಾರ್ಗದಲ್ಲಿರುವ ಕ್ಯಾಂಪ್ ಆಫೀಸ್‌ನಲ್ಲಿ ಅರೆಸೈನಿಕ ಪಡೆಯ ವಿಐಪಿ ಸೆಕ್ಯೂರಿಟಿ ಗ್ರೂಪ್‌ನ (ವಿಎಸ್‌ಜಿ) ಭದ್ರತೆಯನ್ನು ಒದಗಿಸಲಾಗಿದೆ. ಇದು ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಕಾಂಗ್ರೆಸ್‌ನ ಗಾಂಧಿ ಕುಟುಂಬದ ಭದ್ರತೆಯನ್ನು ನೋಡಿಕೊಳ್ಳುತ್ತದೆ.

ಕೇಂದ್ರ ಗೃಹ ಸಚಿವಾಲಯದ ನಿರ್ದೇಶನದ ಮೇರೆಗೆ ಗುರುವಾರ ದೆಹಲಿ ಮುಖ್ಯಮಂತ್ರಿಯ ಭದ್ರತೆಯನ್ನು ಕೇಂದ್ರ ಮೀಸಲು ಪೊಲೀಸ್ ಪಡೆ (CRPF) ವಹಿಸಿಕೊಂಡಿದೆ. ಕೇಂದ್ರ ಗುಪ್ತಚರ ಸಂಸ್ಥೆಗಳ ವರದಿ ನಂತರ ಗುಪ್ತಾ ಅವರಿಗೆ ‘Z’ ಶ್ರೇಣಿಯ ಭದ್ರತೆಯನ್ನು ನೀಡಲಾಗಿದೆ ಎಂದು ಮೂಲಗಳು ತಿಳಿಸಿವೆ.

ದಿನದ 24 ಗಂಟೆಯೂ 22 ರಿಂದ 25 ಶಸ್ತ್ರಸಜ್ಜಿತ CRPF ಕಮಾಂಡೋಗಳ ತಂಡವು ಮುಖ್ಯಮಂತ್ರಿಯವರಿಗೆ ಭದ್ರತೆ ಒದಗಿಸುವ ಕಾರ್ಯದಲ್ಲಿ ನಿರತವಾಗಿರುತ್ತದೆ. ಅವರ ಭದ್ರತೆಗಾಗಿ CRPF ಹೊಸ ಕ್ರಮಗಳನ್ನು ಜಾರಿಗೆ ತರುತ್ತದೆ ಎನ್ನಲಾಗಿದೆ.

51 ವರ್ಷದ ರೇಖಾ ಗುಪ್ತಾ ಅವರಿಗೆ ದೆಹಲಿ ಪೊಲೀಸರು ಈ ಹಿಂದೆ ಉನ್ನತ ಮಟ್ಟದ ಭದ್ರತೆಯನ್ನು ಒದಗಿಸಿದ್ದರು.

ಬುಧವಾರ ಜನ ಸಂವಾದ ಕಾರ್ಯಕ್ರಮದಲ್ಲಿ ವ್ಯಕ್ತಿಯೊಬ್ಬ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರ ಮೇಲೆ ಹಲ್ಲೆ ನಡೆಸಿದ್ದನು. ಬಳಿಕ ಅವರ ಕಚೇರಿಯು ಈ ಹಲ್ಲೆಯನ್ನು ‘ಅವರನ್ನು ಕೊಲ್ಲಲು ಯೋಜಿಸಲಾದ ಪಿತೂರಿ’ಯ ಭಾಗ ಎಂದು ಕರೆದಿದೆ. ಕೊಲೆ ಪ್ರಕರಣದ ಆರೋಪದ ಮೇಲೆ ಗುಪ್ತಾ ಅವರ ಮೇಲೆ ದಾಳಿ ಮಾಡಿದ ವ್ಯಕ್ತಿಯನ್ನು ಸ್ಥಳದಲ್ಲೇ ಬಂಧಿಸಲಾಗಿದ್ದು, ಸದ್ಯ ದೆಹಲಿ ಪೊಲೀಸರ ಕಸ್ಟಡಿಯಲ್ಲಿದ್ದಾನೆ.

ಮೂಲಗಳ ಪ್ರಕಾರ, ಗುಪ್ತಾ ಅವರ ನಿವಾಸಕ್ಕೆ ಪ್ರವೇಶ ನಿಯಂತ್ರಿಸುವುದು, ಭದ್ರತಾ ಸಾಧನಗಳನ್ನು ನಿಯೋಜಿಸುವುದು ಮತ್ತು ಆಕೆ ಸಾರ್ವಜನಿಕವಾಗಿ ಓಡಾಡುವಾಗ ಪುರುಷ ಮತ್ತು ಮಹಿಳಾ ವೈಯಕ್ತಿಕ ಭದ್ರತಾ ಅಧಿಕಾರಿಗಳ (ಪಿಎಸ್‌ಒ) ಮೂಲಕ ಆಕೆಗೆ ಹತ್ತಿರದ ರಕ್ಷಣೆ ಒದಗಿಸುವುದು ಇವುಗಳಲ್ಲಿ ಸೇರಿವೆ.

ಸಿಆರ್‌ಪಿಎಫ್ ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಮತ್ತು ಪಶ್ಚಿಮ ಬಂಗಾಳ, ಸಿಕ್ಕಿಂ, ಬಿಹಾರ ಮತ್ತು ಕರ್ನಾಟಕದ ರಾಜ್ಯಪಾಲರಿಗೆ ಮತ್ತು ಇತರ ಹಲವಾರು ಉನ್ನತ ವ್ಯಕ್ತಿಗಳಿಗೆ ಭದ್ರತೆಯನ್ನು ಒದಗಿಸುತ್ತದೆ.

ರೇಖಾ ಗುಪ್ತಾ ಮೇಲೆ ನಡೆದಿರುವ ದಾಳಿಯ ಹಿಂದೆ ಆಕೆಯನ್ನು ಹತ್ಯೆ ಮಾಡುವ ಯೋಜಿತ ಸಂಚು ಇತ್ತೆಂಬುದು ಈಗ ಬಹಿರಂಗವಾಗಿದೆ.

ಬುಧವಾರ ಬೆಳಿಗ್ಗೆ ಸಿವಿಲ್ ಲೈನ್ಸ್‌ನಲ್ಲಿರುವ ತಮ್ಮ ಕ್ಯಾಂಪ್ ಕಚೇರಿಯಲ್ಲಿ ‘ಜನ್ ಸುನ್‌ವೈ’ ಕಾರ್ಯಕ್ರಮದಲ್ಲಿ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರ ಮೇಲೆ ದಾಳಿ ನಡೆದಿತ್ತು. ಈ ದಾಳಿಯನ್ನು “ಅವರನ್ನು ಕೊಲ್ಲಲು ಯೋಜಿಸಲಾದ ಪಿತೂರಿಯ” ಭಾಗವೆಂಬ ಮಾಹಿತಿ ಈಗ ಲಭ್ಯವಾಗಿದೆ.

ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿರುವ ಪ್ರಕಾರ, ಆರೋಪಿ, ಗುಜರಾತ್‌ನ ರಾಜ್‌ಕೋಟ್‌ನ 41 ವರ್ಷದ ನಿವಾಸಿ ಸಕ್ರಿಯಾ ರಾಜೇಶ್‌ಭಾಯ್ ಖಿಮ್ಜಿಭಾಯ್ ಅವರನ್ನು ಬಂಧಿಸಿ ವಿಚಾರಣೆ ನಡೆಸಲಾಗುತ್ತಿದೆ.

ದೆಹಲಿ ಸಚಿವ ಕಪಿಲ್ ಮಿಶ್ರಾ ಇದು ಸಾಮಾನ್ಯ ದಾಳಿಯಲ್ಲ, ದಾಳಿಕೋರ “ಮುಖ್ಯಮಂತ್ರಿಯನ್ನು ನೆಲಕ್ಕೆ ತಳ್ಳಿ ಹೊಡೆಯಲು” ಪ್ರಯತ್ನಿಸಿದ್ದಾನೆ ಎಂದು ಹೇಳಿದ್ದಾರೆ. ಮುಖ್ಯಮಂತ್ರಿಯವರಿಗೆ ವೈದ್ಯರು ಚಿಕಿತ್ಸೆ ನೀಡುತ್ತಿದ್ದು, ಅವರು ಪ್ರಸ್ತುತ ನಿಗಾದಲ್ಲಿದ್ದಾರೆ. ನಂತರ ಅವರು ಎಂಎಲ್‌ಸಿ (ವೈದ್ಯಕೀಯ ಕಾನೂನು ಪ್ರಕರಣ) ಪರೀಕ್ಷೆಗೆ ಒಳಗಾಗಲಿದ್ದಾರೆ ಎಂದು ಸಿಎಂಒ ಅಧಿಕಾರಿಗಳು ತಿಳಿಸಿದ್ದಾರೆ.

ಶಾಲಿಮಾರ್ ಬಾಗ್‌ನಲ್ಲಿರುವ ಅವರ ನಿವಾಸದ ಸಿಸಿಟಿವಿ ದೃಶ್ಯಾವಳಿಗಳನ್ನು ಉಲ್ಲೇಖಿಸಿ, ಸಿಎಂ ಗುಪ್ತಾ ಅವರ ಮೇಲಿನ ದಾಳಿ ‘ಉತ್ತಮ ಯೋಜಿತ ಪಿತೂರಿಯ ಭಾಗ’ ಎಂದು ಅಧಿಕೃತ ಮೂಲಗಳು ತಿಳಿಸಿವೆ.

# ಸಿಎಂ ಸಿದ್ದರಾಮಯ್ಯ ವಿರುದ್ಧ ಚುನಾವಣಾ ಆಯೋಗಕ್ಕೆ ದೂರು

ಬೆಂಗಳೂರು: 2018ರ ವಿಧಾನಸಭಾ ಚುನಾವಣೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮತಗಳನ್ನು ಖರೀದಿಸಿದ್ದಾರೆ ಎಂದು ಮಾಜಿ ಸಚಿವ ಸಿಎಂ ಇಬ್ರಾಹಿಂ ಅವರು ಆರೋಪಿಸಿದ್ದು, ಈ ಬಗ್ಗೆ ಕಾನೂನು ಕ್ರಮ ಕೈಗೊಳ್ಳುವಂತೆ ಕರ್ನಾಟಕ ಬಿಜೆಪಿ ನಾಯಕರ ನಿಯೋಗ ಗುರುವಾರ ರಾಜ್ಯ ಚುನಾವಣಾ ಆಯೋಗಕ್ಕೆ ದೂರು ನೀಡಿದೆ.

ಮಾಜಿ ಎಂಎಲ್‌ಸಿ ಮತ್ತು ಮುಖ್ಯ ವಕ್ತಾರ ಸಿ.ಎನ್. ಅಶ್ವತ್ಥ ನಾರಾಯಣ್, ಮಾಜಿ ಎಂಎಲ್‌ಸಿಗಳಾದ ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ಅರುಣ್ ಶಹಾಪುರ್ ಮತ್ತು ರಾಜ್ಯ ಕಾನೂನು ಕೋಶದ ಸಂಚಾಲಕ ವಸಂತ ಕುಮಾರ್ ಅವರನ್ನೊಳಗೊಂಡ ಬಿಜೆಪಿ ನಿಯೋಗ ಇಂದು ಬೆಂಗಳೂರಿನಲ್ಲಿರುವ ರಾಜ್ಯ ಚುನಾವಣಾ ಆಯೋಗದ ಕಚೇರಿಗೆ ತೆರಳಿ ದೂರು ಸಲ್ಲಿಸಿದೆ.

2024ರ ಲೋಕಸಭಾ ಚುನಾವಣೆಯಲ್ಲಿ ಹಾಸನ ಲೋಕಸಭಾ ಕ್ಷೇತ್ರದಲ್ಲಿ 7 ಕೋಟಿ ರೂ. ಹಂಚಬೇಕೆಂದು ಅರಸೀಕೆರೆ ಕಾಂಗ್ರೆಸ್ ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರು ಮಾತನಾಡಿರುವ ವಿಡಿಯೋ ಕುರಿತಂತೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಬಿಜೆಪಿ ನಿಯೋಗ ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ದೂರು ನೀಡಿದೆ.



“ಸಿಎಂ ಇಬ್ರಾಹಿಂ ಅವರು ಇತ್ತೀಚೆಗೆ ಸಾರ್ವಜನಿಕ ಕಾರ್ಯಕ್ರಮದಲ್ಲಿ ಭಾಷಣ ಮಾಡುವಾಗ, 2018 ರ ಕರ್ನಾಟಕ ವಿಧಾನಸಭಾ ಚುನಾವಣೆಗೆ ಸಂಬಂಧಿಸಿದಂತೆ ಹೇಳಿಕೆ ನೀಡಿದ್ದನ್ನು ನಿಮ್ಮ ಗಮನಕ್ಕೆ ತರುತ್ತಿದ್ದೇವೆ.

ಬಾದಾಮಿ ವಿಧಾನಸಭಾ ಕ್ಷೇತ್ರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರವಾಗಿ ನಾನು ಮತ್ತು ಹಿರಿಯ ಕಾಂಗ್ರೆಸ್ ನಾಯಕ ಚಿಮ್ಮನಕಟ್ಟಿ 3,000 ಮತಗಳನ್ನು ಖರೀದಿಸಿದ್ದೇವೆ ಎಂದು ಸಿಎಂ ಇಬ್ರಾಹಿಂ ಹೇಳಿದ್ದರು. ನಾವು ಹಣವನ್ನು ಸಾಲವಾಗಿ ಪಡೆದು 3,000 ಮತಗಳನ್ನು ಖರೀದಿಸಿದ್ದೇವೆ. ಮತಗಳನ್ನು ಖರೀದಿಸುವ ಮೂಲಕ, ನಾವು ಸಿದ್ದರಾಮಯ್ಯ ಅವರ ಗೆಲುವನ್ನು ಖಚಿತಪಡಿಸಿಕೊಂಡಿದ್ದೇವೆ. ಆರು ತಿಂಗಳ ನಂತರ, ಸಿದ್ದರಾಮಯ್ಯ ಸಾಲ ಮರುಪಾವತಿಸಿದ್ದಾರೆ” ಎಂದು ಹೇಳಿರುವುದಾಗಿ ದೂರಿನಲ್ಲಿ ತಿಳಿಸಲಾಗಿದೆ.

“ಸಿಎಂ ಇಬ್ರಾಹಿಂ ಹೇಳಿಕೆಯ ವಿಡಿಯೋ ಮಾಧ್ಯಮಗಳಲ್ಲಿ ವ್ಯಾಪಕವಾಗಿ ಪ್ರಸಾರ ಮಾಡಲಾಗಿದೆ” ಎಂದು ದೂರಿನಲ್ಲಿ ತಿಳಿಸಲಾಗಿದೆ. ಇಂತಹ ಮತ ಖರೀದಿ ಕೃತ್ಯವು 1951ರ ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 123(1)(ಬಿ) ಅಡಿಯಲ್ಲಿ ಭ್ರಷ್ಟಚಾರವಾಗಿದೆ ಮತ್ತು ಅಂತಹ ಹೇಳಿಕೆಗಳು ನಿಜವಾಗಿದ್ದರೆ ಅಭ್ಯರ್ಥಿಯ ಆಯ್ಕೆಯನ್ನು ರದ್ದುಗೊಳಿಸಬೇಕು ಎಂದು ಬಿಜೆಪಿ ಆಗ್ರಹಿಸಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.